ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 26-04-2017

# ಪತ್ರಿಕಾ ಪ್ರಕಟಣೆ

## 17 ಲಕ್ಷ ರೈತರಿಗೆ 100ಮುಂಗಾರು ಬೆಳೆ ನಷ್ಟ ಪರಿಹಾರ –ಕಾಗೋಡು ತಿಮ್ಮಪ್ಪ

ಬೆಂಗಳೂರು, ಏಪ್ರಿಲ್ 26 ( ಕರ್ನಾಟಕ ವಾರ್ತೆ) :

ಮುಂಗಾರು ಬೆಳೆ ನಷ್ಟ ಪರಿಹಾರದ ಮೊತ್ತ ಪ್ರತಿ ಹೆಕ್ಟೇರ್‍ಗೆ 6800 ರೂ.ಗಳಂತೆ ಸುಮಾರು 17 ಲಕ್ಷ ರೈತರಿಗೆ 1100 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದ್ದು ರೈತರ ಖಾತೆಗಳಿಗೆ ನೇರವಾಗಿ ಹಣ ಜಮಾ ಮಾಡಲಾಗಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಕಂದಾಯ ಸಚಿವರು ಉಳಿದ 10 ಲಕ್ಷ ರೈತರಿಗೆ ಪರಿಹಾರ ಹಣವನ್ನು ತಿಂಗಳಾಂತ್ಯದಲ್ಲಿ ಬಿಡುಗಡೆ ಮಾಡಲಾಗುವುದು ಎಂದರು.

ರೈತರಿಗೆ ಬಿಡುಗಡೆ ಮಾಡಿರುವ ಪರಿಹಾರದ ಹಣವನ್ನು ರೈತರು ಈ ಹಿಂದೆ ಪಡೆದಿರುವ ಸಾಲಕ್ಕೆ ಮುಟ್ಟುಗೋಲು ಹಾಕಿಕೊಳ್ಳದಂತೆ ಬ್ಯಾಂಕುಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ. ಮುಂಗಾರು ಹಂಗಾಮಿನಲ್ಲಿ ಸುಮಾರು 160 ತಾಲ್ಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಣೆ ಮಾಡಲಾಗಿದೆ. 3458 ಕೋಟಿ ರೂ. ಪರಿಹಾರ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಬರ ನಿರ್ವಹಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಹತ್ತಿರ 8 ರಿಂದ 10 ಕೋಟಿ ಹಣ ಇರಿಸಲಾಗಿದ್ದು ಶಾಸಕರಿಗೂ 2 ಕೋಟಿ ಹಣ ಬಿಡುಗಡೆ ಮಾಡಲಾಗಿದೆ ಅಲ್ಲದೆ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಬರ ನಿರ್ವಹಣೆಗೆ 1.30 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದೆ ಎಂದು ಸಚಿವ ಕಾಗೋಡು ತಿಮ್ಮಪ್ಪ ಅವರು ಮಾತನಾಡಿದರು.

ಕುಡಿಯುವ ನೀರಿನ ತೊಂದರೆ ಇರುವ ಕಡೆ ಟ್ಯಾಂಕರುಗಳ ಮೂಲಕ ನೀರು ಸರಬರಾಜಿಗೆ ಕ್ರಮ ಕೈಗೊಂಡಿದ್ದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳೂ ತಮ್ಮ ವ್ಯಾಪ್ತಿಯಲ್ಲಿನ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ತಹಸೀಲ್ದಾರ್ ಅವರಿಗೆ ವರದಿ ನೀಡುವಂತೆ ಸೂಚನೆ ನೀಡಲಾಗಿದೆ ಎಂದರು. ಪ್ರತಿ ವಾರ ಜಿಲ್ಲಾಡಳಿತವು ಬರ ಹಾಗೂ ನೀರಿನ ಸಮಸ್ಯೆಗಳ ಬಗ್ಗೆ ಸಭೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆಯೂ ಆದೇಶ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಬೇಸಿಗೆ ಮುಗಿಯುವವರೆಗೂ ವರ್ಗಾವಣೆ ಇಲ್ಲ:

ಬೇಸಿಗೆ ಮುಗಿದು ಮಳೆಗಾಲ ಪ್ರಾರಂಭವಾಗುವವರೆಗೂ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಯಾವುದೇ ವರ್ಗಾವಣೆ ಮಾಡುವುದಿಲ್ಲ. ತಹಶೀಲ್ದಾರ್ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ವರ್ಗಾವಣೆ ಕೋರಿ ಅರ್ಜಿ ನೀಡಿದಲ್ಲಿ ಅಂತಹವರ ಮೇಲೆ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದ ಸಚಿವರು ಕಂದಾಯ ಇಲಾಖೆ ಸಿಬ್ಬಂದಿ ಮುಂದಿನ ಮೂರು ತಿಂಗಳಲ್ಲಿ ಸಮರೋಪಾದಿಯಲ್ಲಿ ಬರ ನಿರ್ವಹಣೆ ಹಾಗೂ ಕುಡಿಯುವ ನೀರಿನ ನಿರ್ವಹಣೆ ಕರ್ತವ್ಯದಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಈಗಾಗಲೇ ಸೂಚಿಸಲಾಗಿದೆ ಎಂದು ತಿಳಿಸಿದರು.

ಪಾರಂಪರಿಕ ಅರಣ್ಯ ಕಾಯ್ದೆಯ ಅನುಷ್ಠಾನ ನಿರೀಕ್ಷಿಸಿದ ಮಟ್ಟದಲ್ಲಿ ನಡೆದಿಲ್ಲ ಎಂದ ಸಚಿವರು ಕೊಡಗು ಜಿಲ್ಲೆಯ ದಿಡ್ಡಳ್ಳಿ ಸಂತ್ರಸ್ಥರಿಗೆ ನೆಲೆ ಕಲ್ಪಿಸಲು ಪರ್ಯಾಯ ಸ್ಥಳ ಗುರುತಿಸಲಾಗಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

## 46 ನೇ ವಾರ್ಷಿಕ ಕಲಾಪ್ರದರ್ಶನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 26 ( ಕರ್ನಾಟಕ ವಾರ್ತೆ) :

ಕರ್ನಾಟಕ ಲಲಿತಕಲಾ ಅಕಾಡೆಮಿಯು 2017-18 ನೇ ಸಾಲಿನಲ್ಲಿ 46 ನೇ ಕಲಾ ಪ್ರದರ್ಶನ ಹಾಗೂ ಸುವರ್ಣ ಸಂಭ್ರಮ-ಕಲಾಪುರಸ್ಕಾರ ವಿಶೇಷ ಬಹುಮಾನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಕರ್ನಾಟಕ ನಿವಾಸಿಗಳಾಗಿರುವ ಅಥವಾ ಕಳೆದ ಐದು ವರ್ಷಗಳಿಂದ ಕರ್ನಾಟಕದಲ್ಲಿ ನೆಲೆಸಿರುವ ಕಲಾವಿದರು ಈ ಕಲಾ ಪ್ರದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆ ಸಮಿತಿಯ ಮೂಲಕೃತಿಗಳ ಛಾಯಾಚಿತ್ರ ಆಧರಿಸಿ ಆಯ್ಕೆ ಮಾಡಿದ ನಂತರ ಮೂಲಕೃತಿಗಳನ್ನು ಕಳುಹಿಸಬೇಕಾಗುತ್ತದೆ. ಕಲಾಕೃತಿಗಳು 3 x 3 ಅಳತೆಯ ಒಳಗಿರಬೇಕು. ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಅರ್ಜಿ ಸಲ್ಲಿಸುವ ಅವಧಿ 28-4-2017 ರಿಂದ 22-5-2017. ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, 2 ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು -560 002 ಇಲ್ಲಿ ಖುದ್ದಾಗಿ ಅಥವಾ ರೂ. 10/- ಗಳ ಅಂಚೆ ಚೀತಿ ಲಗತ್ತಿಸಿದ ಸ್ವ-ವಿಳಾಸವುಳ್ಳ (ದೂರವಾಣಿಯ ಸಂಖ್ಯೆಯೊಂದಿಗೆ) ಲಕೋಟೆಯನ್ನು ಕಳುಹಿಸಿಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗೆ 080-22480297 ನ್ನು ಸಂಪರ್ಕಿಸಬಹುದಾಗಿದೆ.

## ದೂರದರ್ಶನ ವಾಹಿನಿಯಲ್ಲಿ ನೆಲದ ಸಿರಿ ಮಾಲಿಕೆಯ ಸಾಕ್ಷ್ಯಚಿತ್ರ

ಬೆಂಗಳೂರು, ಏಪ್ರಿಲ್ 26 (ಕರ್ನಾಟಕ ವಾರ್ತೆ)

**ದೂರದರ್ಶನ ವಾಹಿನಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮಾ ಸಾಧನೆ ಮಾಡಿರುವ ನಾಡಿನ ಸಾಧಕರ/ಸಂಸ್ಥೆಗಳು ಹಾಗೂ ಸರ್ಕಾರದ ಅಭಿವೃದ್ಧಿ ಕಾರ್ಯಗಳ ಕುರಿತು ನಿರ್ಮಿಸಿರುವ ನೆಲದ ಸಿರಿ ಮಾಲಿಕೆಯ ಸಾಕ್ಷ್ಯಚಿತ್ರಗಳು ಪ್ರಸಾರ ಪ್ರತಿದಿನ ಸಂಜೆ 6.00 ಗಂಟೆಯಿಂದ 6.15 ಗಂಟೆ ಅವಧಿಯಲ್ಲಿ ಪ್ರಸಾರಗೊಳ್ಳಲಿದೆ.**

**ಈ ವಿಶೇಷ ಸಾಕ್ಷ್ಯಚಿತ್ರ ಸರಣಿಯಲ್ಲಿ ದಿನಾಂಕ: 26-4-2017 ರಂದು** 101 ಹಾಲು ಸಹಕಾರ ಸಂಘಗಳ ಆರಂಭ, ಬಳ್ಳಾರಿ ಜಿಲ್ಲೆ, **27-4-2017 ರಂದು** ಸಫಾಯಿ ಕರ್ಮಚಾರಿಗಳ ಸ್ಥಿತಿಗತಿ, **28-4-2017 ರಂದು** ಹೊಗೆ ಮುಕ್ತ ಗ್ರಾಮಗಳು, **1-5-2017 ರಂದು** ಶುದ್ಧ ಕುಡಿಯುವ ನೀರು ಘಟಕ ಯೋಜನೆ, ಹಾಸನ **2-5-2017 ರಂದು** ವಿಜಾಪೂರ ಚಿಮ್ಮಲಗಿ ಏತ ನೀರಾವರಿ, ಕೆರೆ ತುಂಬಿಸುವ ಕಾಮಗಾರಿ, **ದಿನಾಂಕ 3-5-2017 ರಂದು** ಶ್ರೀಮತಿ ಎಸ್.ಕೆ.ಪದ್ಮಾವತಿ **ಸಾಕ್ಷ್ಯಚಿತ್ರಗಳು ಭಿತ್ತರವಾಗಲಿವೆ.**

**ಎಸ್‌ಎಂ/ಜೆಡಿ/ಕೆಎಂ**

# <u>ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ</u>

ಬೆಂಗಳೂರು, ಏಪ್ರಿಲ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ಇಲಾಖೆಯಲ್ಲಿ ಮಹಾನಗರ ಪಾಲಿಕೆಗಳಲ್ಲಿನ ತೋಟಗಾರಿಕೆ ನಿರೀಕ್ಷಕರ ಹುದ್ದೆಗಳ ಮತ್ತು ಪೌರಾಡಳಿತ ಇಲಾಖೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರವಸೂಲಿಗಾರರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿ ಮತ್ತು ಸದರಿ ಹುದ್ದೆಗಳ ಕಟ್-ಆಫ್ ಅಂಕಗಳನ್ನು ಏಪ್ರಿಲ್ 25 ರಂದು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಈ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001, ಇವರಿಗೆ ಸಲ್ಲಿಸಬಹುದಾಗಿದೆ.

ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.